## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2020-21ನೇ ಸಾಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮುಂದುವರೆದ ಕ್ರಿಯಾ ಯೋಜನೆಯ ಒಂದನೇ ಮತ್ತು ಎರಡನೇ ತ್ರೈಮಾಸಿಕದ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಇದೇ ಕ್ರಮಾಂಕದ ಆದೇಶ ದಿನಾಂಕ:05-09-2020.
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಪತ್ರಸಂಖ್ಯೆ:ಡಿಕೆಸಿ/31015/01/2020, ದಿನಾಂಕ:08-09-2020.

*****

ಪ್ರಸ್ತಾವನೆ:

ಮೇಲೆ(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ 2020-21ನೇ ಸಾಲಿನ ಮುಂದುವರೆದ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡಲಾಗಿರುತ್ತದೆ. ಅದರನ್ವಯ 2020-21ನೇ ಸಾಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಒಂದು ಮತ್ತು ಎರಡನೇ ತ್ರೈಮಾಸಿಕದ ಅನುದಾನದ ಮೊತ್ತ ರೂ. 5282.00 ಲಕ್ಷಗಳನ್ನು ಬಿಡುಗಡೆ ಮಾಡಿ ಸೂಕ್ತ ಆದೇಶ ಹೊರಡಿಸುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 166 ಕಸಧ 2020, ಬೆಂಗಳೂರು(ಭಾಗ-1) ದಿನಾಂಕ:18-09-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ 2020-21ನೇ ಸಾಲಿನ ಮುಂದುವರೆದ ಕ್ರಿಯಾ ಯೋಜನೆಗಳ ಕಾರ್ಯಕ್ರಮಗಳಿಗೆ ಒಂದು ಮತ್ತು ಎರಡನೇ ತ್ರೈಮಾಸಿಕದ ಅನುದಾನವನ್ನು ಅನುಬಂಧದಲ್ಲಿ ಲಗತ್ತಿಸಿರುವಂತೆ ಬಿಡುಗಡೆ ಮಾಡಲು ಮಂಜೂರಾತಿ ನೀಡಲಾಗಿದೆ.

### :: ಷರತ್ತುಗಳು / ನಿಬಂಧನೆಗಳು ::

1. 2020-21ನೇ ಸಾಲಿನಲ್ಲಿ ನಿಯಮಾನುಸಾರ ಆರ್ಥಿಕ ಇಲಾಖೆಯ ಅನುಮತಿ ಪಡೆದಿರುವ ಮಂಜೂರಾದ ಯೋಜನಾ ಕಾರ್ಯಕ್ರಮಗಳನ್ನು ಹಾಗೂ ಮುಂದುವರೆದ ಯೋಜನಾ ಕಾರ್ಯಕ್ರಮಗಳನ್ನು ಮುಂದುವರೆಸಬೇಕು.
2. ಮುಂದುವರೆದ ಯೋಜನಾ ಕಾರ್ಯಕ್ರಮಗಳಲ್ಲಿ ಯಾವುದೇ ಹೊಸ ಘಟಕಗಳು ಅಥವಾ ಹೊಸ ಯೋಜನೆಗಳು ಒಳಗೊಂಡಿದ್ದಲ್ಲಿ ಅವುಗಳಿಗೆ ಪ್ರತ್ಯೇಕವಾದ ಪ್ರಸ್ತಾವನೆಗಳನ್ನು ಸಲ್ಲಿಸಿ, ನಿಯಮಾನುಸಾರ ಸರ್ಕಾರದ ಮಂಜೂರಾತಿ ಪಡೆಯಬೇಕು.
3. ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2020, ದಿನಾಂಕ: 04.05.2020, 06.05.2020 ಮತ್ತು ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 91 ವೆಚ್ಚ-7/2020 ದಿನಾಂಕ:30.05.2020ರಂತೆ ಯಾವುದೇ ಹೊಸ ಯೋಜನೆ/ಕಾರ್ಯಕ್ರಮ/ಕಾಮಗಾರಿ ಕೈಗೊಳ್ಳುವ ಮುನ್ನ ಆರ್ಥಿಕ ಇಲಾಖೆಯ ಪೂರ್ವಾನುಮತಿ ಮತ್ತು ಸಹಮತಿಯನ್ನು ಕಡ್ಡಾಯವಾಗಿ ಪಡೆಯಬೇಕೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ. ಅಂತಹ ಎಲ್ಲಾ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ನಿಯಮಾನುಸಾರ ಕಳುಹಿಸಿ ಪೂರ್ವಾನುಮತಿ ಪಡೆದ ನಂತರವೇ ಹಣ ಬಿಡುಗಡೆ ಮಾಡುವುದು/ಪ್ರಾರಂಭಿಸುವುದು. ಇದನ್ನು ಉಲ್ಲಂಘನೆ ಮಾಡಿದಲ್ಲಿ ನೇರವಾಗಿ ನಿರ್ದೇಶನಾಲಯದ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡುವುದು.

4. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 91 ವೆಚ್ಚ-7/2020 ದಿನಾಂಕ:30.05.2020ರಂತೆ 2020-21ನೇ ಸಾಲಿನ ಆಯವ್ಯಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಯೋಜನೆಗಳಿಗೆ ಎದುರಾಗಿ ಒದಗಿಸಿರುವ ಅನುದಾನವನ್ನು ಸರ್ಕಾರದಿಂದ ಪ್ರತ್ಯಾಯೋಜಿಸಿ ಮಾಡಿರುವ ಯೋಜನೆಗಳಿಗೆ ಎದುರಾಗಿ ನವೆಂಬರ್ 2020ರ ವರೆಗೆ ಪರಿಷ್ಕೃತ ಅಂದಾಜಿನ ಅರ್ಧದಷ್ಟು ಮೊತ್ತವನ್ನು ಮಾತ್ರ ಬಳಸಿಕೊಳ್ಳತಕ್ಕದ್ದು.
5. ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರರಾದ ಅಧಿಕಾರಿಗಳು ಅವರಿಗೆ ನೀಡಲಾದ ಆರ್ಥಿಕ ಅಧಿಕಾರಕ್ಕೆ ಒಳಪಟ್ಟು ಯೋಜನಾ ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರತಕ್ಕದ್ದು.
6. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ನಿಯಮಗಳು 2000ಅನ್ನು ಕಡ್ಡಾಯವಾಗಿ ಪಾಲಿಸುವುದು.
7. ಪ್ರತಿಯೊಂದು ಯೋಜನೆ / ಕಾಮಗಾರಿಗಳಿಗೆ ಪ್ರತ್ಯೇಕವಾಗಿ ಮಾಸಿಕ ಕಾರ್ಯಕ್ರಮ, ಅನುಷ್ಠಾನ ವೇಳಾಪಟ್ಟಿ (ಎಂಪಿಕ್)ವರದಿಯನ್ನು ನಿಗದಿತ ನಮೂನೆಯಲ್ಲಿ ತಯಾರಿಸಿ ಪ್ರತಿ ತಿಂಗಳ 15ನೇ ತಾರೀಖಿನ ಒಳಗೆ ನಿರ್ದೇಶಕರು (ಪಿಎಂಐ) ಯೋಜನಾ ಇಲಾಖೆಗೆ ಕಳುಹಿಸಿ ಕೊಡುವುದು.
8. ಮುಂದುವರೆದ ಯೋಜನೆ / ಕಾಮಗಾರಿಗಳಿಗೆ ಸಂಬಂಧಿಸಿದಂತೆ ಬೇರೆ ಯಾವುದೇ ಇಲಾಖೆಯಿಂದ ಅನುದಾನ ಪಡೆದಿಲ್ಲವೆಂಬ ದೃಢೀಕರಣ ಪತ್ರ, ಎನ್.ಓ.ಸಿ., ನಿವೇಶನ ದಾಖಲೆ ಇತರೆ ನಿಯಮಾನುಸಾರ ಎಲ್ಲಾ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲಿಸಿ ಜಿಲ್ಲಾಧಿಕಾರಿಗಳ ದೃಢೀಕರಣದೊಂದಿಗೆ ಪಡೆದು ಸದರಿ ದಾಖಲೆಗಳ ಮೇಲೆ ನಿರ್ದೇಶರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಪರಿಶೀಲನೆ ಮಾಡಿ ದೃಢೀಕರಣದೊಂದಿಗೆ ನಿಯಮಾನುಸಾರ ಅಧಿಕಾರ ಪ್ರತಿ ನಿಯೋಜನೆಯಂತೆ ಪರಿಶೀಲಿಸಿ, ಆಡಳಿತಾತ್ಮಕ ಅನುಮೋದನೆಗಾಗಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವುದು.
9. ಮುಂದುವರೆದ ಕಾಮಗಾರಿಗಳಿಗೆ ನಿಯಮಾನುಸಾರ ಪರಿಶೀಲಿಸಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು, ಜಿಲ್ಲೆಯ ಜಿಲ್ಲಾಧಿಕಾರಿಗಳ ಮೂಲಕ ಅನುದಾನ ಬಿಡುಗಡೆಗೊಳಿಸಬೇಕು. ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ಬಳಕೆಯಾಗಿರುವ ಬಗ್ಗೆ ಪ್ರತಿ ಹಂತದಲ್ಲೂ ಜಿಲ್ಲಾಧಿಕಾರಿಗಳು ಖುದ್ದು ಅಥವಾ ಉಪ ವಿಭಾಗಾಧಿಕಾರಿಗಳಿಂತ ಕಡಿಮೆ ದರ್ಜೆ ಇಲ್ಲದ ಅಧಿಕಾರಿಗಳ ತಂಡಗಳ ಮೂಲಕ ತಪಾಸಣೆ ಮಾಡಿಸಿ ವರದಿ ಸಲ್ಲಿಸುವುದು, ನಿರ್ದೇಶರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ದೃಢೀಕರಣದೊಂದಿಗೆ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು. ಹಣ ಬಿಡುಗಡೆಗೊಂಡಿರುವ ಎಲ್ಲಾ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿ/ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಸೆಟ್ ರಿಜಿಸ್ಟರ್‌ನಲ್ಲಿ ಕಡ್ಡಾಯವಾಗಿ ನಮೂದು ಮಾಡುವುದು ಹಾಗೂ ಜಿಯೋ ಟ್ಯಾಗ್ (ಜಿ.ಪಿ.ಎಸ್) ಮೂಲಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವೆಬ್‌ಸೈಟ್‌ನಲ್ಲಿ ಇಂದೀಕರಿಸುವುದು.
10. ಯೋಜನೆಗಳಿಗೆ / ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಉಪಯೋಗಿಸಿಕೊಂಡಿರುವ ಬಗ್ಗೆ ಜಿಲ್ಲಾಧಿಕಾರಿಗಳಿಂದ ದೃಢೀಕರಣವನ್ನು ಪಡೆದು ನಿರ್ದೇಶರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
11. ಯೋಜನೆಗಳಿಗೆ / ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನ ದುರುಪಯೋಗ ಮಾಡಿಕೊಂಡಿದ್ದಲ್ಲಿ ನಿಯಮಾನುಸಾರ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳುವುದು. ಅಂತಹವರ ಸಂಸ್ಥೆಗಳ ಮೇಲೆ ನಿಯಮಾನುಸಾರ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು.

3...

12. ಇಲಾಖೆಯ ಸಭಾ ನಡವಳಿಗಳು ಹಾಗೂ ಯೋಜನೆ / ಕಾಮಗಾರಿವಾರು ಹಣ ಬಿಡುಗಡೆಯನ್ನು ಕಡ್ಡಾಯವಾಗಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸುವುದು.
13. ಬಿಡುಗಡೆ ಮಾಡಿರುವ ಅನುದಾನ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಹಣ ಬಳಕೆ ಪ್ರಮಾಣಪತ್ರವನ್ನು ಒದಗಿಸುವುದು.
14. ಸೇವಾಸಿಂಧು ಮೂಲಕ ಪಡೆಯಬೇಕಾಗಿರುವ ಯೋಜನಾ ಅರ್ಜಿಗಳನ್ನು ಸೇವಾಸಿಂಧು ಮೂಲಕವೇ ಪಡೆಯುವುದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2020, ದಿನಾಂಕ:30-05-2020 ಮತ್ತು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 91 ವೆಚ್ಚ-7/2020, ದಿನಾಂಕ:30-05-2020 ಹಾಗೂ ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 218 ವೆಚ್ಚ 7/2020, ದಿನಾಂಕ:04-08-2020ರಲ್ಲಿ ಆರ್ಥಿಕ ಇಲಾಖೆಯು ನೀಡಿರುವ ಅಭಿಪ್ರಾಯದನ್ವಯ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಹೆಚ್.ಕೆ.ಸುರೇಶಬಾಬು)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
(ಸಂಸ್ಕೃತಿ ಶಾಖೆ)

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 7&8), ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ:ಕಸಂವಾ 166 ಕಸಧ 2020, ಬೆಂಗಳೂರು(ಭಾಗ-2), ದಿನಾಂಕ:18-09-2020.

## ಅನುಬಂಧ

| ಕ್ರ. ಸಂ. | ಲೆಕ್ಕ ಶೀರ್ಷಿಕೆ | 2020-21ನೇ ಸಾಲಿನ ಆಯವ್ಯಯದ ಮಿತಿಯಲ್ಲಿ ಹಂಚಿಕೆ ಮಾಡಿಕೊಳ್ಳಲಾದ ಅನುದಾನ ರೂ. ಲಕ್ಷಗಳಲ್ಲಿ | 1ನೇ ಕಂತು | 2ನೇ ಕಂತು | ಒಟ್ಟಾರೆ ಬಿಡುಗಡೆಯ ಮೊತ್ತ |
|---|---|---|---|---|---|
| 1. | 2205-00-001-0-03-014 | 43.00 | 10.75 | 10.75 | 21.50 |
| 2. | ಇತರೆ ಯೋಜನೆಗಳು | | | | |
| | 2205-00-102-4-01-059 | 900.00 | 225.00 | 225.00 | 450.00 |
| | 2205-00-102-4-01-100 | 1100.00 | 275.00 | 275.00 | 550.00 |
| | 2205-00-102-4-01-103 | 400.00 | 100.00 | 100.00 | 200.00 |
| 3. | ಕನ್ನಡ ಮತ್ತು ಸಂಸ್ಕೃತಿಗೆ ಪ್ರೋತ್ಸಾಹ 2205-00-102-4-31-059 | 4121.00 | 1030.25 | 1030.25 | 2060.50 |
| 4. | ವಿವಿಧ ಅಭಿವೃದ್ಧಿ ಮತ್ತು ಮೂಲ ಸೌಕರ್ಯ ಕಾರ್ಯಗಳು 4202-04-800-2-01-132 | 3000.00 | 750.00 | 750.00 | 1500.00 |
| | 4202-04-800-2-01-386 | 1000.00 | 250.00 | 250.00 | 500.00 |
| | ಒಟ್ಟು | **10564.00** | **2641.00** | **2641.00** | **5282.00** |

(ಹೆಚ್.ಕೆ.ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
(ಸಂಸ್ಕೃತಿ ಶಾಖೆ)